# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2020-21ನೇ ಸಾಲಿನ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ಸರ್ಕಾರದ ಅಧಿಕಾರಿಗಳು/ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 92 ಇಆಸು 2009, ದಿನಾಂಕ:08-07-2010.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 9 ಇಆಸು 2019, ದಿನಾಂಕ:30-11-2019.
3. ನಿರ್ದೇಶಕರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ ಇವರ ಪತ್ರ ಸಂಖ್ಯೆ:ಹಿಮ್ಸ್/ಲೆ.ಪ(3)/11/2020-21, ದಿನಾಂಕ:13-09-2020.
4. ನಿರ್ದೇಶಕರು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ:PER/CAB-III/D-2--173/2020, ದಿನಾಂಕ:28-09-2020 ಮತ್ತು ಸಂಖ್ಯೆ:PER/Cab-1/D-3-59/2021, ದಿನಾಂಕ:02-03-2021.
5. ನಿರ್ದೇಶಕರು, ನೆಫ್ರೋ-ಯುರಾಲಜಿ ಸಂಸ್ಥೆ ಇವರ ಪತ್ರ ಸಂಖ್ಯೆ:ನೆಯುಸಂ/ಲೆಕ್ಕಪತ್ರ/ /2020-21, ದಿನಾಂಕ:28-09-2020.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಇವರ ಪತ್ರ ಸಂಖ್ಯೆ:ರಾಜಿಪಂ/ಕಟ್ಟಡನಿರ್ವಹಣೆ/ಸಿಆರ್-01/2020-21/3292, ದಿನಾಂಕ:29-09-2020.
7. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ಇವರ ಪತ್ರ ಸಂಖ್ಯೆ:ಜಿಪಂಉ:ಯೋಜನೆ:ಸಿಆರ್:58626:2020-21, ದಿನಾಂಕ:08-10-2020.
8. ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಕಗಪ್ರಅಪ್ರಾ/22/ಆ/2020-21, ದಿನಾಂಕ:23-10-2020.
9. ಮುಖ್ಯ ಕಾರ್ಯನಿರ್ವಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಪತ್ರ ಸಂಖ್ಯೆ:ಜಿಪಂಯಾ:ಯೋಶಾ:2020-21, ದಿನಾಂಕ:27-10-2020.
10. ಮುಖ್ಯ ಕಾರ್ಯನಿರ್ವಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ಸಂಖ್ಯೆ:ಜಿಪಂಮಂ/ಮುಯೋಶಾ/ಪಿ2/ಸಿಆರ್-15/2020-21, ದಿನಾಂಕ:29-10-2020.
11. ದಿನಾಂಕ:02-03-2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು)ರವರ ಅಧ್ಯಕ್ಷತೆಯಲ್ಲಿ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ಜರುಗಿದ ಸಭೆಯ ನಡವಳಿ.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1)ರಲ್ಲಿರುವ ಸರ್ಕಾರದ ಆದೇಶದಲ್ಲಿ, ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ಸರ್ಕಾರದ ಅಧಿಕಾರಿಗಳು/ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ/ವಿನೂತನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿ, ಪ್ರತಿ ವರ್ಷದ ಆಯವ್ಯಯದಲ್ಲಿ ಬೇಡಿಕೆಗನುಗುಣವಾಗಿ ಒಂದು ಮೊತ್ತದ ಅನುದಾನವನ್ನು ಹಂಚಿಕೆ ಮಾಡುವ ಕ್ರಮವಿರುತ್ತದೆ. ಈ ಯೋಜನೆಗೆ ಸರ್ಕಾರವು 2020-21ನೇ ಸಾಲಿಗೆ ರೂ.300.00 ಲಕ್ಷಗಳನ್ನು ಮೀಸಲಿರಿಸಿದೆ.

ಮೇಲೆ ಓದಲಾದ ಕ್ರ.ಸಂ. (2)ರಲ್ಲಿರುವ ದಿನಾಂಕ:30-11-2019ರ ಆದೇಶದಲ್ಲಿ 2019-20ನೇ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಪೊಲೀಸ್ ಇಲಾಖೆಯ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಿ, ಅನುದಾನದ ಕೊರತೆಯಿಂದ ಭಾಗಶಃ ಅನುದಾನವನ್ನು ಬಿಡುಗಡೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿರುವ ದಿನಾಂಕ:13-09-2020ರ ಪತ್ರದಲ್ಲಿ ಹಾಸನ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇಲ್ಲಿ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮತ್ತೊಂದು ಲಿಕ್ವಿಡ್ ಆಕ್ಸಿಜನ್ ಗ್ಯಾಸ್ ಸ್ಥಾಪಿಸುವುದಕ್ಕಾಗಿ ಮತ್ತು ಗ್ರಾಮೀಣ ಪ್ರದೇಶದ ಜನರಲ್ಲಿನ ರೋಗ ಪತ್ತೆ ಹಚ್ಚಲು ಮೊಬೈಲ್ ಸ್ಕ್ರೀನಿಂಗ್ ಘಟಕಕ್ಕಾಗಿ ಚಾಲೆಂಜ್ ಫಂಡ್ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ.

ಮೇಲೆ ಓದಲಾದ ಕ್ರ.ಸಂ. (4)ರಲ್ಲಿರುವ ದಿನಾಂಕ:28-09-2020ರ ಪತ್ರದಲ್ಲಿ Tissue Bio Bank ಸ್ಥಾಪನೆಗಾಗಿ ರೂ.13,44,14,000/-ಗಳನ್ನು ಮತ್ತು ದಿನಾಂಕ:02-03-2021ರ ಪತ್ರದಲ್ಲಿ Tissue Bio Bank ಯೋಜನೆಗಾಗಿ ವೈದ್ಯಕೀಯ ಉಪಕರಣಗಳನ್ನು ಕೊಳ್ಳಲು ರೂ.3.44 ಕೋಟಿಗಳ ಅವಶ್ಯಕತೆ ಇದ್ದು, ಕನಿಷ್ಠ ರೂ.75,00,000/-ಗಳನ್ನು ಮಂಜೂರು ಮಾಡಬೇಕೆಂದು ನಿರ್ದೇಶಕರು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ಇವರು ತಮ್ಮ ಪತ್ರಗಳಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (5)ರಲ್ಲಿರುವ ದಿನಾಂಕ:28-09-2020ರ ಪತ್ರದಲ್ಲಿ Organ Donation Online ಮತ್ತು Therapeutic Management system ಯೋಜನೆಗಳಿಗಾಗಿ ತಲಾ ರೂ.20.00ಲಕ್ಷಗಳನ್ನು ಒದಗಿಸುವಂತೆ ನಿರ್ದೇಶಕರು, ನೆಫ್ರೋ ಯುರಾಲಜಿ ಸಂಸ್ಥೆ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (6)ರಲ್ಲಿರುವ ದಿನಾಂಕ:29-09-2020ರ ಪತ್ರದಲ್ಲಿ ಜಿಲ್ಲಾ ಪಂಚಾಯತ್ ಕಟ್ಟಡದಲ್ಲಿ ಸೌರಶಕ್ತಿ ವಿದ್ಯುತ್ ಘಟಕ ಅಳವಡಿಸಲು ಅಂದಾಜು ರೂ.48.88ಲಕ್ಷಗಳನ್ನು ಬಿಡುಗಡೆ ಮಾಡಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (7)ರಲ್ಲಿರುವ ದಿನಾಂಕ:08-10-2020ರ ಪತ್ರದಲ್ಲಿ ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ವಿನೂತನ ಮಾದರಿಯಲ್ಲಿ ನಿರ್ವಹಿಸಲಾಗುತ್ತಿರುವ ಘನ ತ್ಯಾಜ್ಯ ನಿರ್ವಹಣೆಗಾಗಿ ರೂ.660.00ಲಕ್ಷ ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (8)ರಲ್ಲಿರುವ ದಿನಾಂಕ:23-10-2020ರ ಪತ್ರದಲ್ಲಿ ವಿವಿಧ ಯೋಜನೆಗಳ ಭೌತಿಕ ಮತ್ತು ಆರ್ಥಿಕ ಪ್ರಗತಿ ನಿರ್ವಹಿಸಲು "WORKSOFT" ತಂತ್ರಾಂಶವನ್ನು ಅಳವಡಿಸಿಕೊಳ್ಳಲು ರೂ.10.00ಲಕ್ಷಗಳ ಅನುದಾನ ಒದಗಿಸುವಂತೆ ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (9)ರಲ್ಲಿರುವ ದಿನಾಂಕ:27-10-2020ರ ಪತ್ರದಲ್ಲಿ ಜಿಲ್ಲಾಡಳಿತ ಭವನದ ಕಟ್ಟಡದ ಮೇಲೆ ಸೌರ ಮೇಲ್ಛಾವಣಿ ಘಟಕ ಅಳವಡಿಸಲು ರೂ.69.00ಲಕ್ಷ ಮತ್ತು ದುರ್ಗಮ ಹಾಗೂ ಕಾಡಿನಂಚಿನಲ್ಲಿರುವ ಆರು ತಾಂಡಾಗಳಿಗೆ ಸೌರ ಬೀದಿ ದೀಪಗಳನ್ನು ಅಳವಡಿಸುವುದಕ್ಕಾಗಿ ರೂ.117.00ಲಕ್ಷ ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (10)ರಲ್ಲಿರುವ ದಿನಾಂಕ:29-10-2020ರ ಪತ್ರದಲ್ಲಿ ಎರೆಹುಳು ಉತ್ಪಾದನಾ ಘಟಕ ಮತ್ತು ಜೀವಸಾರ ಉತ್ಪಾದನಾ ಘಟಕ ನಿರ್ಮಿಸಲು ರೂ.9.00ಲಕ್ಷ ಹಾಗೂ ಕೈಮಗ್ಗ ಎಲೆಕ್ಟ್ರಾನಿಕ್ ಜಕಾರ್ಡ್ ಅಳವಡಿಸುವ ಪೈಲಟ್ ಪ್ರಾಜೆಕ್ಟ್‌ಗೆ ರೂ.58.75ಲಕ್ಷ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಒದಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(11)ರಲ್ಲಿರುವ ನಡವಳಿಯಲ್ಲಿ ಚಾಲೆಂಜ್ ಫಂಡ್ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಡಳಿತ ಸುಧಾರಣೆ) ಅಧ್ಯಕ್ಷತೆಯಲ್ಲಿ ದಿನಾಂಕ:02-03-2021ರಂದು ನಡೆದ ಸಭೆಯಲ್ಲಿ ಮೇಲೆ ವಿವರಿಸಿದ ಎಲ್ಲಾ ಪ್ರಸ್ತಾವನೆಗಳನ್ನು ಪರಿಶೀಲಿಸಿ, 2020-21ನೇ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಕೆಳಕಂಡ ಯೋಜನೆಗಳಿಗೆ ಕೆಲವು ಷರತ್ತುಗಳೊಂದಿಗೆ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ.

| ಕ್ರ. ಸಂ | ವಿವರ | ಯೋಜನೆಗೆ ಮಂಜೂರಾದ ಒಟ್ಟು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಜಿಲ್ಲಾ ಪಂಚಾಯತ್, ಉಡುಪಿ :-<br>ಅ) ಸಮುದಾಯ ಸಂಘಟನೆ (150X20,000) = 30,00,000.<br>ಆ) ಸ್ವಚ್ಛತಾ ಪರಿಕರಗಳ ಖರೀದಿಗೆ (150X20,000) = 30,00,000. | 60.00 |
| 2 | ಜಿಲ್ಲಾ ಪಂಚಾಯತ್, ಮಂಡ್ಯ:<br>ಅ) ಎರೆ ಹುಳು ಉತ್ಪಾದನಾ ಘಟಕ ಮತ್ತು ಜೀವಸಾರ ಉತ್ಪಾದನಾ ಘಟಕ ನಿರ್ಮಿಸಲು ರೂ.9,00,000.<br>ಆ) ಕೈಮಗ್ಗ ವಿನ್ಯಾಸ ಅಭಿವೃದ್ಧಿ ಕೇಂದ್ರಕ್ಕೆ ರೂ.13,75,000. | 22.75 |
| 3 | ನೆಫ್ರೋ ಯುರಾಲಜಿ ಸಂಸ್ಥೆ.<br>ಅ) Organ Donation Online ತಂತ್ರಾಂಶಕ್ಕೆ ರೂ.10,00,000.<br>ಆ) Therapeutic Management Systemಗೆ ರೂ.20,00,000. | 30.00 |
| 4 | ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ<br>ಅ) ಮೊಬೈಲ್ ಸ್ಕ್ರೀನಿಂಗ್ ಘಟಕಕ್ಕೆ. ರೂ.16,00,000. | 16.00 |
| 5 | ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ.<br>ಅ) "WORKSOFT" ತಂತ್ರಾಂಶ ಅಳವಡಿಕೆಗೆ ರೂ.7,00,000. | 07.00 |
| 6 | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ<br>ಅ) Tissue Bio Bank ಸ್ಥಾಪನೆಗೆ ರೂ.47,17,500. | 47.17 |
| | **ಒಟ್ಟು** | **182.92** |

ಮೇಲೆ ಓದಲಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ(ಆಸು) 54 ಇಆಸು 2020,**
**ಬೆಂಗಳೂರು, ದಿನಾಂಕ:09-03-2021.**

ಪ್ರಸ್ತಾವನೆಗಳಲ್ಲಿ ವಿವರಿಸಿರುವಂತೆ, ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ಸರ್ಕಾರದ ಅಧಿಕಾರಿಗಳು/ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. 2020-21ನೇ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಕೆಳಕಂಡ 6 ಯೋಜನೆಗಳಿಗೆ ಷರತ್ತಿಗೊಳಪಟ್ಟು ಅನುದಾನ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

| ಕ್ರ. ಸಂ | ವಿವರ | ಯೋಜನೆಗೆ ಮಂಜೂರಾದ ಒಟ್ಟು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಜಿಲ್ಲಾ ಪಂಚಾಯತ್, ಉಡುಪಿ :-<br>ಅ) ಸಮುದಾಯ ಸಂಘಟನೆ (150X20,000) = 30,00,000.<br>ಆ) ಸ್ವಚ್ಛತಾ ಪರಿಕರಗಳ ಖರೀದಿಗೆ (150X20,000) = 30,00,000. | 60.00 |
| 2 | ಜಿಲ್ಲಾ ಪಂಚಾಯತ್, ಮಂಡ್ಯ:<br>ಅ) ಎರೆ ಹುಳು ಉತ್ಪಾದನಾ ಘಟಕ ಮತ್ತು ಜೀವಸಾರ ಉತ್ಪಾದನಾ ಘಟಕ ನಿರ್ಮಿಸಲು ರೂ.9,00,000.<br>ಆ) ಕೈಮಗ್ಗ ವಿನ್ಯಾಸ ಅಭಿವೃದ್ಧಿ ಕೇಂದ್ರಕ್ಕೆ ರೂ.13,75,000. | 22.75 |
| 3 | ನೆಫ್ರೋ ಯುರಾಲಜಿ ಸಂಸ್ಥೆ.<br>ಅ) Organ Donation Online ತಂತ್ರಾಂಶಕ್ಕೆ ರೂ.10,00,000.<br>ಆ) Therapeutic Management Systemಗೆ ರೂ.20,00,000. | 30.00 |
| 4 | ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಸನ<br>ಅ) ಮೊಬೈಲ್ ಸ್ಕ್ರೀನಿಂಗ್ ಘಟಕಕ್ಕೆ. ರೂ.16,00,000. | 16.00 |
| 5 | ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ.<br>ಅ) "WORKSOFT" ತಂತ್ರಾಂಶ ಅಳವಡಿಕೆಗೆ ರೂ.7,00,000. | 07.00 |
| 6 | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ<br>ಅ) Tissue Bio Bank ಸ್ಥಾಪನೆಗೆ ರೂ.47,17,500. | 47.17 |
| | **ಒಟ್ಟು** | **182.92** |

**(ಒಟ್ಟು ಒಂದು ಕೋಟಿ ಎಂಬತ್ತೇರಡು ಲಕ್ಷದ ತೊಂಬತ್ತೇರಡು ಸಾವಿರ ರೂಪಾಯಿಗಳು ಮಾತ್ರ).**

2019-20ನೇ ಸಾಲಿನಲ್ಲಿ ಕೆಳಕಂಡ ಪ್ರಸ್ತಾವನೆಗಳಿಗೆ ಅನುದಾನ ಮಂಜೂರಾಗಿದ್ದು, ಅನುದಾನದ ಕೊರತೆಯಿಂದ ಈ ಕೆಳಕಂಡಂತೆ ಇಲಾಖೆ/ಸಂಸ್ಥೆಗಳಿಗೆ ಬಿಡುಗಡೆ ಮಾಡಬೇಕಾಗಿರುವ ಬಾಕಿ ಮೊತ್ತವನ್ನು 2020-21ನೇ ಸಾಲಿನ ಅನುದಾನದಲ್ಲಿ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

| ಕ್ರ. ಸಂ | ಯೋಜನೆಯ ಹೆಸರು | ಯೋಜನೆಗೆ ಮಂಜೂರಾದ ಒಟ್ಟು ಮೊತ್ತ (ರೂ. ಗಳಲ್ಲಿ) | ಇಲಾಖೆಯಿಂದ 2019-20ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ | ಇಲಾಖೆಯಿಂದ 2020-21ನೇ ಸಾಲಿನ ಆಯವ್ಯಯದಲ್ಲಿ ಬಿಡುಗಡೆ ಮಾಡಲು ಬಾಕಿ ಇರುವ ಮೊತ್ತ (ರೂ. ಗಳಲ್ಲಿ) |
|---|---|---|---|---|
| 1 | (ವೈದ್ಯಕೀಯ ಶಿಕ್ಷಣ ಇಲಾಖೆ)<br>IOT based Monitoring and Laboratory equipment interfacing with e-hospital at medical Education Institutions. | 1,93,07,500/- | 1,38,87,000/- | 54,20,500/- |
| 2 | (ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ ಬೆಂಗಳೂರು)<br>Picture Archival & Communication System (PACS), Radiology Information System (RIS) | 1,44,00,000/- | 1,03,59,000/- | 40,41,000/- |
| 3 | (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ)<br>Trashcon | 60,00,000/- | 43,14,000/- | 16,86,000/- |
| 4 | (ಪೊಲೀಸ್ ಇಲಾಖೆ)<br>CHATBOT | 20,00,000/- | 14,40,000/- | 5,60,000/- |
| | **ಒಟ್ಟು** | **4,17,07,500/-** | **3,00,00,000/-** | **1,17,07,500/-** |

**(ಒಟ್ಟು ಒಂದು ಕೋಟಿ ಹದಿನೇಳು ಲಕ್ಷದ ಏಳು ಸಾವಿರದ ಐದು ನೂರು ರೂಪಾಯಿಗಳು ಮಾತ್ರ).**

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2052-00-090-0-25- (ಯೋಜನೇತರ) ಆಡಳಿತಾತ್ಮಕ ಸುಧಾರಣಾ ಚಾಲೆಂಜ್ ಫಂಡ್ 059- ಇತರ ಖರ್ಚುಗಳು ಅಡಿಯಲ್ಲಿ ಭರಿಸತಕ್ಕದ್ದು".

ಯೋಜನೆ ನಿರ್ವಹಿಸುವ ಅಧಿಕಾರಿಯು ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ ಬಿಡುಗಡೆಯಾದ ಅನುದಾನವನ್ನು ಆಕರಣೆಯಾದ ಬಡ್ಡಿ ಸಮೇತ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

...4

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಪ್ರಸ್ತುತ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಅನುಸರಿಸಿ, ಸದರಿ ಯೋಜನೆಯನ್ನು ಜಾರಿಗೊಳಿಸತಕ್ಕದ್ದು.

ಯೋಜನೆಯು ಪುನರಾವರ್ತಿತ ಖರ್ಚುಗಳನ್ನು ತಮ್ಮದೇ ಸಂಪನ್ಮೂಲದಿಂದ ಅಥವಾ ಸರ್ಕಾರದ ಆಯವ್ಯಯ ಒದಗಿಸಿರುವ ಅನುದಾನ ಮಿತಿಯೊಳಗೆ ಭರಿಸತಕ್ಕದ್ದು.

ಜಿಲ್ಲಾ ಪಂಚಾಯಿತಿ, ಉಡುಪಿ ಇವರ ಯೋಜನೆಗೆ ಬಿಡುಗಡೆಯಾಗಿರುವ ಅನುದಾನವನ್ನು ಪ್ರಸ್ತುತ ಕೇಂದ್ರ ಸರ್ಕಾರದ ಯೋಜನೆಯಲ್ಲಾಗಲಿ ಹಾಗೂ ಅಥವಾ ಗ್ರಾಮೀಣಾಭಿವೃದ್ಧಿ ಇಲಾಖೆಯ ಯೋಜನೆಯಲ್ಲಾಗಲಿ ಪುನರಾವರ್ತನೆ (overlap) ಆಗದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನೀಡಲಾಗಿದೆ. ಈ ಯೋಜನೆ ಅನುಷ್ಠಾನವಾದ 6 ತಿಂಗಳ ನಂತರ ಯೋಜನೆ ಕಾರ್ಯಗತಗೊಳಿಸಿರುವ ಫಲಿತಾಂಶದ ಕುರಿತು ಸಮರ್ಥನೆ/ವರದಿಯನ್ನು ಸಹ ನೀಡಲು ಸೂಚಿಸಿದೆ.

ಜಿಲ್ಲಾ ಪಂಚಾಯಿತಿ, ಮಂಡ್ಯ ಇವರಿಗೆ ಎರೆಹುಳು ಉತ್ಪಾದನಾ ಘಟಕ ಮತ್ತು ಜೀವಸಾರ ಉತ್ಪಾದನಾ ಘಟಕ ನಿರ್ಮಿಸುವ ಸಲುವಾಗಿ ಬಿಡುಗಡೆಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ, ರೇಷ್ಮೆ ಇಲಾಖೆಯಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಯಾವುದೇ ಯೋಜನೆಯಡಿಯಲ್ಲಿ ಈ ಪ್ರಸ್ತಾವನೆಯಲ್ಲಿನ ಯೋಜನೆಗೆ ಅನುದಾನ ನೀಡುವುದು ಪುನರಾವರ್ತನೆ (overlap) ಆಗಬಾರದು, ಹಾಗೂ ಈ ಯೋಜನೆಯಿಂದ ಎಷ್ಟು ಜನರಿಗೆ ಉಪಯೋಗವಾಗುತ್ತದೆ, ಫಲಾನುಭವಿಗಳ ಆದಾಯ ಎಷ್ಟು ಹೆಚ್ಚಳವಾಗುತ್ತದೆ ಎಂಬುದರ ಬಗ್ಗೆ ವರದಿ ನೀಡಬೇಕು.

ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ.) ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರೈಸಿದ ನಂತರ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ಮೌಲ್ಯಮಾಪನ ಮಾಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಆಇ 2 ಟಿಎಫ್ ಪಿ 2020, ದಿನಾಂಕ:30-05-2020ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಬಿ.ಎಸ್. ರವಿಕುಮಾರ್) 9/3/2024
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ),

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕಪತ್ರ)/(ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ.
7. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ.
8. ಸರ್ಕಾರದ ಕಾರ್ಯದರ್ಶಿಗಳು, ಖಜಾನೆ-2 ಮತ್ತು ಪದನಿಮಿತ್ತ ಖಜಾನೆ ಆಯುಕ್ತರು, ಆರ್ಥಿಕ ಇಲಾಖೆ, ವಾಣಿಜ್ಯ ತೆರಿಗೆಗಳ ಕಟ್ಟಡ, ಗಾಂಧಿ ನಗರ, ಬೆಂಗಳೂರು-560009.
9. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು.
10. ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ನೃಪತುಂಗ ರಸ್ತೆ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು.
12. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ
13. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ.
14. ಉಪನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
15. ನಿರ್ದೇಶಕರು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಡಾ: ಮರಿಗೌಡ ರಸ್ತೆ, ಬೆಂಗಳೂರು.
16. ನಿರ್ದೇಶಕರು, ನೆಫ್ರೋ ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12), ವಿಧಾನಸೌಧ, ಬೆಂಗಳೂರು.
18. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ-3), ವಿಧಾನಸೌಧ, ಬೆಂಗಳೂರು.
19. ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬಹುಮಹಡಿ ಕಟ್ಟಡ.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.